Sree Siddaganga Education Society (R.)



Estd. 1982



Sree Siddaganga College of Arts, Science and Commerce for Women

(Affiliated to Tumkur University) Re-accredited with Grade B+

B.H. Road, Tumkur-572102. Karnataka Ph: 0816-2272312 E-mail : sscasc.women@gmail.com Website : www.sscwtumkur.org

## Department of Political Science Collaboration with Pre-University Teacher's Association

### Guest Lecturer on "One Nation One Election"

Sree Siddaganga Arts Science and commerce College for women have been consistently striving to uphold the constitutional valence among the girl students. The College engages activities in the college that helps to imbibe the social responsibility among the students.

The Pre university teacher's academy initialled a felicitation of PU Teachers on **02-08-2018** in the college campus at **10-00AM**.

**Dr. Sandeep shastri** , well known Political analyst in Karnataka was invited as guest. **Dr. Sandeep shastri** on this occasion stressed on the importance of integrity among the citizen and the concept of 'One Nation One Election' . He also called for the students to be responsible citizen of India and deliver the fundamental duties and Rights with intense care . The Guest spoke on the vital role of a voter , impact and affect of voting . The students were enlightened with their constitutional rights and were requested to be righteous in casting the vote.

The MLA of Tumkur city , Sri. Jyothi Ganesh and Dr. DN Yogeeswarappa Principal SSCASCW were also present in the programme and gave observation on the topic 'One Nation One Election'.

PRINCIPAL
Sree Siddaganga College of Arts
Science and Commerce for Women
B.H. Road, TUMKUR.



ಕಾರ್ಯಾಗಾರಕ್ಕೆ ಆಗಮಿಸಿದ ಸಂಪನ್ಮೂಲ ವ್ಯಕ್ತಿಯನ್ನು ಸ್ವಾಗತಿಸುತ್ತಿರುವುದು .



[illegible] [illegible] ಕೊಠಡಿಗೆ ತೆರಳುತ್ತಿರುವ ಸಂಪನ್ಮೂಲ ವ್ಯಕ್ತಿಗಳು .




ವೇದಿಕೆಯಲ್ಲಿ ಆಸೀನರಾಗಿರುವ ಪ್ರೊ. ರಮೇಶ ಬೆಳಗಿ, ಪ್ರೊ. ಚಂದ್ರಶೇಖರಯ್ಯ, ಡಾ. ಸಂದೀಪ್ ಶಾಸ್ತ್ರಿ, ಹಾಗೂ ಪ್ರೊ. ಪರಶಿವ ಮೂರ್ತಿ ರವರು.



ಸಂವಾದ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದ ಪ್ರಾಧ್ಯಾಪಕರು ಹಾಗು ವಿದ್ಯಾರ್ಥಿನಿಯರು.

## ಶ್ರೀ ಸಿದ್ಧಗಂಗಾ ಕಲಾ ವಿಜ್ಞಾನ ಮತ್ತು ವಾಣಿಜ್ಯ ಮಹಿಳಾ ಪದವಿ ಕಾಲೇಜು, ತುಮಕೂರು-2.

### ರಾಜ್ಯಶಾಸ್ತ್ರ ವಿಭಾಗ – ಒಂದು ದಿನದ ಕಾರ್ಯಗಾರದ ವರದಿ

### ವಿಷಯ: "ಒಂದು ದೇಶ ಒಂದು ಚುನಾವಣೆ."

ಪ್ರಸುತ ಭಾರತದ ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಭಾವನೆಗಳು ರಾಜಕೀಯದ ಒಂದು ಭಾಗವಾಗಿ ಕಾರ್ಯನಿರ್ವಹಿಸುವ ಅಗತ್ಯವಿದೆ. ಇದನ್ನು ಅರ್ಥಮಾಡಿಕೊಂಡು ಇತ್ತೀಚೆಗೆ 'ಒಂದು ದೇಶ, ಒಂದು ಚುನಾವಣೆ' ಎಂಬ ವಿಷಯದ ಬಗ್ಗೆ ಎಲ್ಲೆಡೆ ವ್ಯಾಪಕ ಚರ್ಚೆಗಳು ಆಗುತ್ತಿವೆ. ಇದರ ಹಿನ್ನೆಲೆಯಲ್ಲಿ ಕರ್ನಾಟಕ ರಾಜ್ಯ ಪದವಿಪೂರ್ವ ಕಾಲೇಜುಗಳ ರಾಜ್ಯಶಾಸ್ತ್ರ ಸಮಘದ ಜಿಲ್ಲಾ ಶಾಲೆ, ಇವರ ಸಹಯೋಗದೊಂದಿಗೆ ರಾಜ್ಯಶಾಸ್ತ್ರ ವಿಭಾಗವು ಶೈಕ್ಷಣಿಕ ಕಾರ್ಯಗರ ಮತ್ತು ವಿಶೆಷ ಉಪನ್ಯಾಸವನ್ನು ದಿನಾಂಕ.02.08.2018ರ ಬೆಳಗ್ಗೆ 10.00ಗಂಟೆಗೆ ಹಮ್ಮಿಕೊಂಡಿತ್ತು. ಇದರ ಮುಖ್ಯ ಅತಿಥಿಗಳು ಮತ್ತು ವಿಶೇಷ ಉಪನ್ಯಾಸಕರಾದ ಡಾ.ಸಂದೀಪ್ ಶಾಸ್ತ್ರಿ ಸಹ ಕುಲಪತಿಗಳು, ಜೈನ್ ವಿಶ್ವವಿದ್ಯಾನಿಲಯ ಹಾಗೂ ಹೆಸರಾಂತ ರಾಜಕೀಯ ವಿಶ್ಲೇಷಕರು ಮಾತನಾಡುತ್ತಾ, 'ಒಂದು ದೇಶ ಒಂದೇ ಚುನಾವಣೆ' ಎಂಬ ವಿಷಯವನ್ನು ಕುರಿತು ಅನುಕೂಲ ಮತ್ತು ಅನಾನುಕೂಲತೆಗಳ ಬಗ್ಗೆ ವಿವರಿಸಿದರು..

ನಂತರ ಜಿಲ್ಲಾ ಪದವಿ ಪೂರ್ವ ಶಿಕ್ಷಣ ಇಲಾಖೆ ಉಪನಿರ್ದೇಶಕಿ ಎಸ್.ನಾಗರತ್ನ ಹಾಗೂ ಶಾಸಕ ಜಿ.ಬಿ.ಜ್ಯೋತಿಗಣೇಶ್ ಸಹ ಸಮಾರಂಭವನ್ನು ಕುರಿತು ಮಾತನಾಡುತ್ತಾ, ಇಂದಿನ ಕಂಪ್ಯೂಟರ್ ಯುಗದಲ್ಲಿ ಹಳೆಯ ವಿಚಾರಗಳು ಕಣ್ಮರೆಯಾಗುತ್ತಿರುವ ದಿನಗಳಲ್ಲಿ ರಾಜ್ಯಶಾಸ್ತ್ರ ವಿಭಾಗದ ಈ ಕಾರ್ಯಕ್ರಮ ನಿಜಕ್ಕೂ ಸ್ವಾಗತಾರ್ಹ. ಸಾರ್ವಜನಿಕರಿಗೆ ಕಾನೂನು ಮತ್ತು ಸಂವಿಧಾನದ ಬಗ್ಗೆ ಅರಿವು ಮೂಡಿಸುವಂತಹ ಕೆಲಸಗಳನ್ನು ಹೆಚ್ಚೆಚ್ಚು ಮಾಡುವಂತೆ ಶುಭ ಕೋರಿದರು.

ಸಂಘದ ಕಾರ್ಯದರ್ಶಿ ಎಂ.ವಿ.ಅಜಯ್‌ಕುಮಾರ್, ಜಿಲ್ಲಾ ರಾಜ್ಯಶಾಸ್ತ್ರ ಸಂಘದ ಗೌರವಾಧ್ಯಕ್ಷ ರಮೇಶ್ ಆರ್.ಬೀಳಗಿ ಮತ್ತು ಕಾಲೇಜಿನ ಪ್ರಾಚಾರ್ಯರಾದ ಡಾ.ಡಿ.ಎನ್.ಯೋಗಿಶ್ವರಪ್ಪ ರಾಜ್ಯಶಾಸ್ತ್ರ ವಿಭಾಗದ ಮುಖ್ಯಸ್ಥರಾದ ಪ್ರೊ.ಪರಶಿವಮೂರ್ತಿ ಮತ್ತು ಉಪನ್ಯಾಸಕಿ ಶ್ರೀಮತಿ ಬಿ.ಎಸ್.ಪಾವನ ಹಾಗೂ ಸುಮಾರು 85 ವಿಶೇಷ ಆಹ್ವಾನಿತರು, ವಿದ್ಯಾರ್ಥಿಗಳು ಸಹ ಉಪಸ್ಥಿತರಿದ್ದರು.



## ಶೈಕ್ಷಣಿಕ ಕಾರ್ಯಾಗಾರದಲ್ಲಿ ಡಾ.ಸಂದೀಪ್ ಶಾಸ್ತ್ರಿ ಬೇಸರ

# ರಾಜಕೀಯ ಜ್ಞಾನವಿಲ್ಲದ ಯುವ ಪೀಳಿಗೆ

ಪ್ರಜಾವಾಣಿ ವಾರ್ತೆ

ತುಮಕೂರು: 'ಇಂದಿನ ಮಕ್ಕಳು ಕಲಾ ವಿಭಾಗವನ್ನು ಆಯ್ಕೆ ಮಾಡಿಕೊಳ್ಳುವಲ್ಲಿ ಹಿಂಜರಿಯುತ್ತಿದ್ದಾರೆ. ಈ ಕಾರಣದಿಂದಲೇ ಯುವ ಪೀಳಿಗೆಯಲ್ಲಿ ರಾಜಕೀಯ ಜ್ಞಾನ ಕಡಿಮೆ ಇರುವುದನ್ನು ಕಾಣುತ್ತಿದ್ದೇವೆ' ಎಂದು ರಾಜಕೀಯ ವಿಶ್ಲೇಷಕ ಹಾಗೂ ಜೈನ್ ವಿಶ್ವವಿದ್ಯಾನಿಲಯದ ಸಹ ಕುಲಪತಿ ಡಾ.ಸಂದೀಪ್ ಶಾಸ್ತ್ರಿ ತಿಳಿಸಿದರು.

ಪದವಿ ಪೂರ್ವ ಕಾಲೇಜುಗಳ ರಾಜ್ಯಶಾಸ್ತ್ರ ಸಂಘ, ಪದವಿ ಪೂರ್ವ ಶಿಕ್ಷಣ ಇಲಾಖೆ ವತಿಯಿಂದ ಸಿದ್ಧಗಂಗಾ ಮಹಿಳಾ ಪದವಿ ಕಾಲೇಜಿನಲ್ಲಿ ಹಮ್ಮಿಕೊಂಡಿದ್ದ ಶೈಕ್ಷಣಿಕ ಕಾರ್ಯಾಗಾರ, ಪ್ರತಿಭಾ ಪುರಸ್ಕಾರ ಮತ್ತು ನಿವೃತ್ತರಿಗೆ ಸನ್ಮಾನ ಸಮಾರಂಭದಲ್ಲಿ ಮಾತನಾಡಿದರು.

ಮಕ್ಕಳು ವಿಜ್ಞಾನ ಮತ್ತು ವಾಣಿಜ್ಯ ವಿಭಾಗವನ್ನೇ ಹೆಚ್ಚು ಆರಿಸಿಕೊಳ್ಳುತ್ತಿರುವುದರಿಂದಲೂ ಅವರಿಗೆ ರಾಜಕೀಯ ಜ್ಞಾನವಿಲ್ಲ ಎಂದು ತಿಳಿಸಿದರು.

ಒಂದೇ ದೇಶ, ಒಂದೇ ಚುನಾವಣೆ ಎಂಬ ವಿಷಯದ ಬಗ್ಗೆ ಎಲ್ಲಡೆ ವ್ಯಾಪಕ ಚರ್ಚೆ ಆಗುತ್ತಿದೆ. ಇದು ನಡೆದರೆ ಸುಮಾರು 59 ತಿಂಗಳ ಕಾಲ ಅಭಿವೃದ್ಧಿ ಕಾರ್ಯಗಳಿಗೆ ಯಾವುದೇ ತೊಡಕು ಉಂಟಾಗುವುದಿಲ್ಲ ಎಂಬ ವಾದವು ಅಲ್ಲಲ್ಲಿ ಕೇಳಿ ಬರುತ್ತಿದೆ ಎಂದು ತಿಳಿಸಿದರು.

ಜಿಲ್ಲಾ ಪದವಿ ಪೂರ್ವ ಶಿಕ್ಷಣ ಇಲಾಖೆ ಉಪನಿರ್ದೇಶಕಿ ಎಸ್.ನಾಗರತ್ನ, ಶಾಸಕ ಜಿ.ಬಿ.ಜ್ಯೋತಿಗಣೇಶ್, ಜಿಲ್ಲಾ ರಾಜ್ಯಶಾಸ್ತ್ರ ಸಂಘದ ಅಧ್ಯಕ್ಷ ಬಿ.ಯು. ಚಂದ್ರಶೇಖರಯ್ಯ ಮಾತನಾಡಿದರು.

ಕಾರ್ಯಾಗಾರದಲ್ಲಿ ಪ್ರಥಮ ಸ್ಥಾನ ಪಡೆದ ತಿಪಟೂರಿನ ಬಸವೇಶ್ವರ ಪದವಿ ಪೂರ್ವ ಕಾಲೇಜಿನ ವಿದ್ಯಾರ್ಥಿ ರವಿಕುಮಾರ್ ಹಾಗೂ ನಿವೃತ್ತ ಉಪನ್ಯಾಸಕ ಗಂಗಣ್ಣ ಅವರನ್ನು ಸನ್ಮಾನಿಸಲಾಯಿತು.

ಸಂಘದ ಗೌರವಾಧ್ಯಕ್ಷ ರಮೇಶ್ ಆರ್.ಬೀಳಗಿ, ಪ್ರಾಂಶುಪಾಲ ಡಾ.ಡಿ.ಎನ್. ಯೋಗೀಶ್ವರಪ್ಪ, ಸಂಘದ ಕಾರ್ಯದರ್ಶಿ ಎಂ.ವಿ.ಅಜಯ್ ಕುಮಾರ್, ರಾಜ್ಯಶಾಸ್ತ್ರ ವಿಭಾಗದ ಮುಖ್ಯಸ್ಥ ಪರಶಿವಮೂರ್ತಿ, ಸಂಘದ ಮಾಜಿ ಅಧ್ಯಕ್ಷ ರಂಗಪ್ಪ, ಕಾರ್ಯಾಧ್ಯಕ್ಷ ಎಸ್.ಕುಮಾರಯ್ಯ, ಖಜಾಂಚಿ ಟಿ.ಜೆ. ಜ್ಯೋತಿಪ್ರಕಾಶ್, ಕಾವ್ಯಾ, ರಘು ಇದ್ದರು.



ಕಾರ್ಯಾಗಾರದಲ್ಲಿ 'ರಾಜ್ಯಶಾಸ್ತ್ರ ಮಾರ್ಗದರ್ಶಿ' ಎಂಬ ಪುಸ್ತಕವನ್ನು ಬಿಡುಗಡೆಗೊಳಿಸಲಾಯಿತು

# ಮತದಾನದಿಂದ ಅಕ್ಷರಸ್ಥರು ದೂರ

## ರಾಜಕೀಯ ವಿಶ್ಲೇಷಕ ಡಾ.ಸಂದೀಪ್‌ಶಾಸ್ತ್ರಿ ಅಸಮಾಧಾನ

■ ವಿಜಯವಾಣಿ ಸುದ್ದಿಜಾಲ ತುಮಕೂರು

ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಭಾವನೆಗಳು ರಾಜಕೀಯದ ಒಂದು ಭಾಗವಾಗಿ ಕಾರ್ಯನಿರ್ವಹಿಸುವ ಅಗತ್ಯವಿದೆ ಎಂದು ರಾಜಕೀಯ ವಿಶ್ಲೇಷಕ ಡಾ.ಸಂದೀಪ್‌ಶಾಸ್ತ್ರಿ ಅಭಿಪ್ರಾಯಪಟ್ಟರು.

ಸಿದ್ಧಗಂಗಾ ಮಹಿಳಾ ಪದವಿ ಕಾಲೇಜಿನಲ್ಲಿ ರಾಜ್ಯ ಪಿಯು ಕಾಲೇಜುಗಳ ರಾಜ್ಯಶಾಸ್ತ್ರ ಸಂಘ, ರಾಜ್ಯಶಾಸ್ತ್ರ ವಿಭಾಗದಿಂದ ಗುರುವಾರ ಆಯೋಜಿಸಿದ್ದ ಶೈಕ್ಷಣಿಕ ಕಾರ್ಯಾಗಾರ, ಪ್ರತಿಭಾ ಪುರಸ್ಕಾರ ಮತ್ತು ನಿವೃತ್ತರಿಗೆ ಸನ್ಮಾನ ಸಮಾರಂಭದಲ್ಲಿ ವಿಶೇಷ ಉಪನ್ಯಾಸ ನೀಡಿದರು.

ಅಭಿಪ್ರಾಯ ರೂಪಿಸುವ ಜವಾಬ್ದಾರಿಯನ್ನು ರಾಜಕೀಯ ಪಕ್ಷಗಳ ಮುಖಂಡರು, ಜನಪ್ರತಿನಿಧಿಗಳು ನಿಭಾಯಿಸಬೇಕು. ದೇಶದಲ್ಲಿ ಏಕಕಾಲದಲ್ಲಿ ಚುನಾವಣೆ ನಡೆದರೆ, ಸುಮಾರು 59 ತಿಂಗಳು ಅಭಿವೃದ್ಧಿ ಕಾರ್ಯಗಳಿಗೆ ಅಡ್ಡಿಯಾಗುವುದಿಲ್ಲ ಎಂದರು.

ಸಮೀಕ್ಷೆಗಳು ಚುನಾವಣಾ ಸಂದರ್ಭದಲ್ಲಿ ಬಹುಮುಖ್ಯ ಪಾತ್ರ ವಹಿಸುತ್ತವೆ. ಸಮೀಕ್ಷೆಗಳಿಂದ ಮಾತ್ರ ಜನರಲ್ಲಿನ ಮನಸ್ಥಿತಿ, ಅವಶ್ಯಕತೆ ತಿಳಿಯಲು ಸಾಧ್ಯ. ವಿಪರ್ಯಾಸವೆಂದರೆ ನಮ್ಮಲ್ಲಿ ಅಕ್ಷರಸ್ಥರು ಚುನಾವಣೆ ಸಮಯದಲ್ಲಿ ಮತಚಲಾವಣೆ ಮಾಡುವುದನ್ನು ಮರೆಯುತ್ತಿದ್ದಾರೆ ಎಂದು ಬೇಸರಿಸಿದರು.

ಶಾಸಕ ಜಿ.ಬಿ.ಜ್ಯೋತಿಗಣೇಶ್ ಮಾತನಾಡಿ, ಕಂಪ್ಯೂಟರ್ ಯುಗದಲ್ಲಿ ಹಳೆಯ ವಿಚಾರಗಳು ಕಣ್ಮರೆಯಾಗುತ್ತಿವೆ. ಇಂತಹ ಸನ್ನಿವೇಶದಲ್ಲಿ ಸಂವಿಧಾನಗ ಅರಿವು ಮೂಡಿಸುವ ಕೆಲಸಗಳನ್ನು ರಾಜ್ಯಶಾಸ್ತ್ರ ಸಂಘ ಮಾಡುತ್ತಿದೆ ಎಂದರು.

ಡಿಡಿಪಿಯು ಎಸ್.ನಾಗರತ್ನಾ, ಜಿಲ್ಲಾ ರಾಜ್ಯಶಾಸ್ತ್ರ ಸಂಘದ ಅಧ್ಯಕ್ಷ ಬಿ.ಯು. ಚಂದ್ರಶೇಖರಯ್ಯ, ಕಾರ್ಯದರ್ಶಿ ಎಂ.ವಿ. ಅಜಯ್‌ಕುಮಾರ್, ಜಿಲ್ಲಾ ರಾಜ್ಯಶಾಸ್ತ್ರ ಸಂಘದ ಗೌರವಾಧ್ಯಕ್ಷ ರಮೇಶ್‌ಆರ್ ಬೀಳಗಿ, ಸಿದ್ಧಗಂಗಾ ಮಹಿಳಾ ಪದವಿ ಕಾಲೇಜು ಪ್ರಾಚಾರ್ಯ ಡಿ.ಎನ್. ಯೋಗೀಶ್ವರಪ್ಪ, ರಾಜ್ಯಶಾಸ್ತ್ರ ವಿಭಾಗದ ಮುಖ್ಯಸ್ಥ ಪರಶಿವಮೂರ್ತಿ ಇತರರಿದ್ದರು.

### ಇಬ್ಬರಿಗೆ ಸನ್ಮಾನ

ದ್ವಿತೀಯ ಪಿಯು ರಾಜ್ಯಶಾಸ್ತ್ರ ವಿಷಯದಲ್ಲಿ ಜಿಲ್ಲೆಗೆ ಪ್ರಥಮ ಸ್ಥಾನ ಪಡೆದಿದ್ದ ತಿಪಟೂರು ಬಸವೇಶ್ವರ ಪಿಯು ಕಾಲೇಜು ವಿದ್ಯಾರ್ಥಿ ರವಿಕುಮಾರ್, ನಿವೃತ್ತ ಉಪನ್ಯಾಸಕ ಗಂಗಣ್ಣ ಅವರನ್ನು ಸಂಘದಿಂದ ಸನ್ಮಾನಿಸಲಾಯಿತು.



ತುಮಕೂರಿನಲ್ಲಿ ರಾಜ್ಯ ಪಿಯು ಕಾಲೇಜುಗಳ ರಾಜ್ಯಶಾಸ್ತ್ರ ಸಂಘದಿಂದ ಗುರುವಾರ ಹಮ್ಮಿಕೊಂಡಿದ್ದ ಶೈಕ್ಷಣಿಕ ಕಾರ್ಯಾಗಾರಕ್ಕೆ ರಾಜಕೀಯ ವಿಶ್ಲೇಷಕ ಡಾ.ಸಂದೀಪ್‌ಶಾಸ್ತ್ರಿ ಚಾಲನೆ ನೀಡಿದರು.

ಅಕ್ಷರಸ್ಥರು ಚುನಾವಣೆ ಸಮಯದಲ್ಲಿ ಮತಚಲಾವಣೆ ಮಾಡುವುದನ್ನು ಮರೆಯುತ್ತಿರುವುದು ನಮ್ಮ ದುರಂತ

# ಏಕಕಾಲದಲ್ಲಿ ಚುನಾವಣೆ ನಡೆಸಿ: ಡಾ.ಸಂದೀಪ್ ಶಾಸ್ತ್ರಿ ಸಲಹೆ

**ತುಮಕೂರು:** ಇಡೀ ದೇಶದಲ್ಲಿ ಏಕಕಾಲದಲ್ಲಿ ಚುನಾವಣೆ ನಡೆದರೆ, ಸುಮಾರು 59 ತಿಂಗಳ ಕಾಲ ಅಭಿವೃದ್ಧಿ ಕಾರ್ಯಗಳಿಗೆ ಯಾವುದೇ ತೊಡಕು ಉಂಟಾಗುವುದಿಲ್ಲ ಎಂದುರಾಜಕೀಯ ವಿಶ್ಲೇಷಕ ಹಾಗೂ ಜೈನ್ ವಿಶ್ವವಿದ್ಯಾನಿಲಯದ ಸಹ ಕುಲಪತಿ ಡಾ.ಸಂದೀಪ್ ಶಾಸ್ತ್ರಿ ತಿಳಿಸಿದರು.

ನಗರದ ಸಿದ್ಧಗಂಗಾ ಮಹಿಳಾ ಪದವಿ ಕಾಲೇಜು ಆವರಣದ ಅಕ್ಕಮಹಾದೇವಿ ಸಭಾಂಗಣದಲ್ಲಿ ಕರ್ನಾಟಕ ರಾಜ್ಯ ಪದವಿ ಪೂರ್ವ ಕಾಲೇಜುಗಳ ರಾಜ್ಯಶಾಸ್ತ್ರ ಸಂಘದ ಜಿಲ್ಲಾ ಶಾಖೆ, ಪದವಿ ಪೂರ್ವ ಶಿಕ್ಷಣ ಇಲಾಖೆ, ರಾಜ್ಯಶಾಸ್ತ್ರ ವಿಭಾಗ ಹಾಗೂ ಸಿದ್ಧಗಂಗಾ ಮಹಿಳಾ ಪದವಿ ಕಾಲೇಜಿನ ರಾಜ್ಯಶಾಸ್ತ್ರ ವಿಭಾಗ ಇವುಗಳ ಸಂಯುಕ್ತಾಶ್ರಯದಲ್ಲಿ ಏರ್ಪಡಿಸಿದ್ದ ಶೈಕ್ಷಣಿಕ ಕಾರ್ಯಾಗಾರ, ಪ್ರತಿಭಾ ಪುರಸ್ಕಾರ ಮತ್ತು ನಿವೃತ್ತರಿಗೆ ಸನ್ಮಾನ ಸಮಾರಂಭದಲ್ಲಿ ಮಾತನಾಡಿದರು.

**ಸಮೀಕ್ಷೆಗಳ ಪಾತ್ರ ಪ್ರಮುಖ:** ಸಮೀಕ್ಷೆಗಳು ಚುನಾವಣಾ ಸಂದರ್ಭದಲ್ಲಿ ಬಹುಮುಖ್ಯ ಪಾತ್ರ ವಹಿಸುತ್ತವೆ. ಸಮೀಕ್ಷೆಗಳಿಂದ ಮಾತ್ರ ಜನರಲ್ಲಿನ ಮನಸ್ಥಿತಿ, ಅವಶ್ಯಕತೆಗಳನ್ನು ತಿಳಿಯಲು ಸಾಧ್ಯ. ವಿಪರ್ಯಾಸವೆಂದರೆ ನಮ್ಮಲ್ಲಿ ಅಕ್ಷರಸ್ಥರು ಚುನಾವಣೆ ಸಮಯದಲ್ಲಿ ಮತಚಲಾವಣೆ ಮಾಡುವುದನ್ನು ಮರೆಯುತ್ತಿರುವುದು ನಮ್ಮ ದುರಂತ ಎಂದರು.



**ತುಮಕೂರಿನ ಸಿದ್ಧಗಂಗಾ ಮಹಿಳಾ ಪದವಿ ಕಾಲೇಜಿನಲ್ಲಿ ಆಯೋಜಿಸಿದ್ದ ಶೈಕ್ಷಣಿಕ ಕಾರ್ಯಾಗಾರ, ಪ್ರತಿಭಾ ಪುರಸ್ಕಾರ ಮತ್ತು ನಿವೃತ್ತರಿಗೆ ಸನ್ಮಾನ ಸಮಾರಂಭದಲ್ಲಿ ಶಾಸಕ ಜೆ.ಬಿ. ಜ್ಯೋತಿಗಣೇಶ್ ಮಾತನಾಡಿದರು.**

ಭಾರತೀಯ ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಭಾವನೆಗಳು ರಾಜಕೀಯದ ಒಂದು ಭಾಗವಾಗಿ ಕಾರ್ಯನಿರ್ವಹಿಸುವ ಅಗತ್ಯವಿದೆ ಎಂದು

ಇತ್ತೀಚಿನ ದಿನಗಳಲ್ಲಿ ಒಂದುದೇಶ, ಒಂದು ಚುನಾವಣೆ ಎಂಬ ವಿಷಯದ ಬಗ್ಗೆ ಎಲ್ಲೆಡೆ ವ್ಯಾಪಕ ಚರ್ಚೆಗಳು ಆಗುತ್ತಿವೆ ಎಂದು ಹೇಳಿದರು.

**ಕಲಾ ವಿಭಾಗದ ನಿರ್ಲಕ್ಷ್ಯ:** ಇಂದಿನ ದಿನಗಳಲ್ಲಿ ವಿದ್ಯಾರ್ಥಿಗಳು ಕಲಾ ವಿಭಾಗವನ್ನು ಆಯ್ಕೆ ಮಾಡಿಕೊಳ್ಳುವಲ್ಲಿ ಹಿಂಜರಿಯುತ್ತಿದ್ದಾರೆ. ಆದರೆ ಇತರೆ ವಿಜ್ಞಾನ ಹಾಗೂ ವಾಣಿಜ್ಯ ವಿಭಾಗದ ವಿದ್ಯಾರ್ಥಿಗಳು ಸಮಾಜ ವಿಜ್ಞಾನವನ್ನು ಅಭ್ಯಸಿಸುವಲ್ಲಿ ಹೆಚ್ಚಿನ ಆಸಕ್ತಿ ತೋರುತ್ತಿದ್ದಾರೆ ಎಂದು ಹೇಳಿದರು.

ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಜಿಲ್ಲಾ ಪದವಿ ಪೂರ್ವ ಶಿಕ್ಷಣ ಇಲಾಖೆ ಉಪ ನಿರ್ದೇಶಕರಾದ ಎಸ್.ನಾಗರತ್ನ ಪ್ರತಿಭಾವಂತ ವಿದ್ಯಾರ್ಥಿಗಳನ್ನು ಗುರ್ತಿಸಿ ಅವರಿಗೆ ಅಭಿನಂದಿಸುವ ಮೂಲಕ ವಿದ್ಯಾರ್ಥಿಗಳನ್ನು ಪ್ರೋತ್ಸಾಹಿಸುವುದು ಶ್ಲಾಘನೀಯ ಎಂದರು.

ಕಾರ್ಯಕ್ರಮದಲ್ಲಿ ಪ್ರತಿಭಾ ಪುರಸ್ಕಾರ ನೀಡಿ ಮಾತನಾಡಿದ ನಗರ ಕ್ಷೇತ್ರದ ಶಾಸಕ ಜೆ.ಬಿ. ಜ್ಯೋತಿ ಗಣೇಶ್ ಇಂದಿನ ಕಂಪ್ಯೂಟರ್‌ಯುಗದಲ್ಲಿ ಸಾರ್ವಜನಿಕರಿಗೆ ಕಾನೂನು, ಸಂವಿಧಾನಗ ಬಗ್ಗೆ ಅರಿವು ಮೂಡಿಸುವಂತಹ ಕೆಲಸಗಳನ್ನು ರಾಜ್ಯಶಾಸ್ತ್ರ ಸಂಘ ಅನುಕರಣೀಯ ಎಂದರು.

ಅಧ್ಯಕ್ಷತೆ ವಹಿಸಿದ್ದ ಜಿಲ್ಲಾ ರಾಜ್ಯಶಾಸ್ತ್ರ ಸಂಘದ ಅಧ್ಯಕ್ಷ ಬಿ.ಯು.ಚಂದ್ರಶೇಖರಯ್ಯ ಮಾತನಾಡಿ ಜಿಲ್ಲಾ ರಾಜ್ಯಶಾಸ್ತ್ರ ಸಂಘವು ಸುಮಾರು 24 ವರ್ಷಗಳಿಂದ ಸಕ್ರಿಯವಾಗಿ ಕೆಲಸ ಮಾಡುತ್ತಾ ಬಂದಿದ್ದು, ಕ್ರಿಯಾಶೀಲ ವಿದ್ಯಾರ್ಥಿಗಳು ಹಾಗೂ ಉಪನ್ಯಾಸಕರನ್ನು ಗುರ್ತಿಸಿ, ಗೌರವಿಸುವ ಕೆಲಸ ಮಾಡುತ್ತಿದೆ ಎಂದು ಹೇಳಿದರು.

ಜಿಲ್ಲಾರಾಜ್ಯಶಾಸ್ತ್ರ ಸಂಘದ ಕಾರ್ಯದರ್ಶಿ ಎಂ.ವಿ. ಅಜಯ್‌ಕುಮಾರ್ ಮಾತನಾಡಿ ರಾಜ್ಯಶಾಸ್ತ್ರವನ್ನು ಉಳಿಸುವ ನಿಟ್ಟಿನಲ್ಲಿ ಸಂಘವು ರಾಜ್ಯಮಟ್ಟದ ಕಾರ್ಯಾಗಾರಗಳನ್ನೂ ಮುಂದಿನ ದಿನಗಳಲ್ಲಿ ಹಮ್ಮಿಕೊಳ್ಳಲಿದೆ ಎಂದರು.

ಕಾರ್ಯಕ್ರಮದಲ್ಲಿ ಜಿಲ್ಲೆಗೇ ಮೊದಲನೇ ಸ್ಥಾನ ಪಡೆದ ತಿಪಟೂರಿನ ಬಸವೇಶ್ವರ ಪದವಿ ಪೂರ್ವ ಕಾಲೇಜಿನ ವಿದ್ಯಾರ್ಥಿ ರವಿಕುಮಾರ್ ಅವರನ್ನು ಸಂಘದ ವತಿಯಿಂದ ಸನ್ಮಾನಿಸಿ ಗೌರವಿಸಲಾಯಿತು. ಅಲ್ಲದೆ ಇದೇ ವೇಳೆ, ತುರುವೇಕೆರೆಯ ನಿವೃತ್ತ ಉಪನ್ಯಾಸಕರಾದ ಗಂಗಣ್ಣ ಅವರನ್ನು ಸಹ ಸನ್ಮಾನಿಸಿ ಗೌರವಿಸಲಾಯಿತು.

ಜಿಲ್ಲಾ ರಾಜ್ಯ ಶಾಸ್ತ್ರ ಸಂಘದ ಗೌರವಾಧ್ಯಕ್ಷ ರಮೇಶ್. ಆರ್ ಬೀಳಗಿ, ಸಿದ್ಧಗಂಗಾ ಮಹಿಳಾ ಪದವಿ ಕಾಲೇಜಿನ ಪ್ರಾಂಶುಪಾಲ ಡಾ. ಡಿ.ಎಸ್. ಯೋಗೀಶ್ವರಪ್ಪ, ಸಿದ್ಧಗಂಗಾ ಮಹಿಳಾ ಪದವಿ ಕಾಲೇಜಿನ ರಾಜ್ಯಶಾಸ್ತ್ರ ವಿಭಾಗದ ಮುಖ್ಯಸ್ಥ ಪರಶಿವಮೂರ್ತಿ, ಜಿಲ್ಲಾ ಸಂಘದ ಮಾಜಿ ಅಧ್ಯಕ್ಷ ರಂಗಪ್ಪ, ಸಂಘದ ಕಾರ್ಯಾಧ್ಯಕ್ಷ ಎಸ್. ಕುಮಾರಯ್ಯ, ಖಜಾಂಚಿ ಟಿ.ಜೆ.ಜ್ಯೋತಿಪ್ರಕಾಶ್ ಈ ಸಂದರ್ಭದಲ್ಲಿ ಹಾಜರಿದ್ದರು.